# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ–01ರಲ್ಲಿ ದಿನಾಂಕ: 06–02–2021 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಸುಂದರೇಶ್ ಸಹಾಯಕ ಅಭಿಯಂತರರು ಯೋಜನೆ.
4. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್
5. ಶ್ರೀ. ವೆಂಕಟೇಶ್ ಮೂರ್ತಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು,
6. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ–01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ವಾರ್ಡ್ ನಂ –01ರ ವ್ಯಾಪ್ತಿಯಲ್ಲಿರುವ ಪ್ರದೇಶಗಳಲ್ಲಿ ಬ್ಲಾಕ್ ಸ್ಪಾಟ್ ಜಾಗಗಳಲ್ಲಿ ಕಸವನ್ನು ಸಮರ್ಪಕವಾಗಿ ನಡೆಯುತ್ತಿರುವುದಿಲ್ಲ ವೆಂದು ಸ್ಥಳೀಯರು ಕೋರಿದರು. | ಶ್ರೀ. ವಿವೇಕ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ದೂರುಗಳನ್ನು ಸರಿಪಡಿಸುವಂತೆ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್–1) |
| 02 | ವಾರ್ಡ್ ನಂ –01ರ ವ್ಯಾಪ್ತಿಯಲ್ಲಿರುವ ಯಲಹಂಕ ಒಲ್ಡ್ ಟೌನ್ ಹಾಗೂ ವೆಂಕಟಾಲ ಜಯಮುನಿ ಬಡಾವಣೆಯಲ್ಲಿ ಹೊಸದಾಗಿ ಬೋರ್‌ವೆಲ್ ಕೋರೆದು ನೀರು ಪೂರೈಸಬೇಕೆಂದು ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಹಾಲಿ ಇರುವ ಸಂಪರ್ಕವನ್ನು ಕಡಿತಗೊಳಿಸಲಾಗಿದ್ದು, ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸುವಂತೆ ನೊಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 03 | ವಾರ್ಡ್ ನಂ –01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಲೇಕ್ ವೀಹ್ ಬಡಾವಣೆ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ. ಹಾಗೂ ಎರಡು ಕಂಪನಿಯವರಿಗೆ ಗುತ್ತಿಗೆ ನೀಡಿರುವುದರಿಂದ ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲ ಎಂದು ಸ್ಥಳೀಯರು ಸಭೆಯಲ್ಲಿ ದೂರನ್ನು ಸಲ್ಲಿಸಿದರು. | ಶ್ರೀ.ಬಾಬುರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್ ರವರಿಗೆ ಸಾರ್ವಜನಿಕರ ದೂರುಗಳನ್ನು ಸರಿಪಡಿಸುವಂತೆ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. | ಶ್ರೀ.ಬಾಬುರೆಡ್ಡಿ, ಸಹಾಯಕ ಅಭಿಯಂತರರು ವಿದ್ಯುತ್ |

| | | | |
|---|---|---|---|
| 04 | ಯಲಹಂಕ ಸರ್ಕಾರಿ ಆಸ್ಪತ್ರೆ ಮುಂಭಾಗ ಹಾಗೂ ಕಾಂಪೌಂಡ್ ಹತ್ತಿರ ಕಸ ವಿಲೇವಾರಿಯು ಸಮರ್ಪಕವಾಗಿ ಮಾಡುತ್ತಿರುವುದಿಲ್ಲ ಎಂದು ಸಾರ್ವಜನಿಕರು ಸಭೆಯಲ್ಲಿ ಅಕ್ಷೇಪಿಸಿದರು. | ಶ್ರೀ. ವಿವೇಕ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ದೂರುಗಳನ್ನು ಸರಿಪಡಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್-1) |
| 05 | ಯಲಹಂಕ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಬಿ.ಬಿ.ರಸ್ತೆ ಹಾಗೂ ಗಾಂಧಿನಗರದಲ್ಲಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸ್ಥಳೀಯರಾದ ಶ್ರೀ.ಅ.ಬ.ಶಿವಕುಮಾರ್ ರವರು ಸಭೆಗೆ ದೂರನ್ನು ಸಲ್ಲಿಸಿದರು. | ಶ್ರೀ.ಬಾಬುರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್ ರವರಿಗೆ ಸಾರ್ವಜನಿಕರ ದೂರುಗಳನ್ನು ಸರಿಪಡಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. | ಶ್ರೀ.ಬಾಬುರೆಡ್ಡಿ, ಸಹಾಯಕ ಅಭಿಯಂತರರು ವಿದ್ಯುತ್ |
| 06 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಕೋಗಿಲು ವೃತ್ತ ಹಾಗೂ ಸರ್ವಿಸ್ ರಸ್ತೆಯಲ್ಲಿರುವ ಬ್ಲಾಕ್ ಸ್ಪಾಟ್‌ಗಳನ್ನು ಸ್ವಚ್ಛಗೊಳಿಸುವಂತೆ ಸಭೆಯಲ್ಲಿ ವೆಂಕಟಾಲ ಗ್ರಾಮಸ್ಥರು ಕೋರಿದರು. | ಶ್ರೀ. ವಿವೇಕ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ಜಾಗದಲ್ಲಿ ಸ್ವಚ್ಛಗೊಳಿಸಲು ಕ್ರಮ ವಹಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್-1) |

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.